## ಸಮಾಚಾರ ಸಣ್ಣದಲ್ಲ

### ಭೂಕಂಪ ಸಂಬಂಧಿತ ವರದಿ ಕೊಡಿ: ಸಿಎಂ

**ಬೆಂಗಳೂರು:** ಕಲಬುರಗಿ ಜಿಲ್ಲೆಯಲ್ಲಿ ಲಘು ಭೂಕಂಪನ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಈ ಸಂಬಂಧ ವರದಿ ನೀಡುವಂತೆ ಆದೇಶ ನೀಡಿದ್ದಾರೆ. ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಚಿಂಚೋಳಿ, ಸೇಡಂನಲ್ಲಿ ತುರ್ತಾಗಿ ಪರಿಹಾರ ಕೇಂದ್ರಗಳನ್ನು ತೆರೆಯಲು ಸೂಚನೆ ನೀಡಿದರು. ಭೂಕಂಪದಿಂದ ಹಾನಿಗೀಡಾದ ಮನೆಗಳಿಗೆ ಪರಿಹಾರ ಒದಗಿಸಲು ಆದೇಶಿಸಿದ ಸಿಎಂ ಭೂಕಂಪನ ಪ್ರಕರಣಕ್ಕೆ ಸಂಬಂಧಪಟ್ಟಂತೆ ವರದಿ ನೀಡುವಂತೆ ನಿರ್ದೇಶನ ನೀಡಿದರು. ರಾಜ್ಯದಲ್ಲಿ ಸುರಿಯುತ್ತಿರುವ ಮಳೆಯಿಂದ ಉಂಟಾಗಿರುವ ಹಾನಿ, ಬೆಳೆ ಹಾನಿ ಮತ್ತು ಇತರ ಸಮಸ್ಯೆಗಳ ಕುರಿತು ಚರ್ಚೆ ನಡೆಸಿದರು. ಸಚಿವ ಕೆ.ಎಸ್ ಈಶ್ವರಪ್ಪ, ವಿ. ಸೋಮಣ್ಣ, ಕೆ. ಗೋಪಾಲಯ್ಯ, ಬೈರತಿ ಬಸವರಾಜ್, ಮುನಿರತ್ನ, ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್, ಹಣಕಾಸು ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಐಎಸ್‌ಎಸ್ ಪ್ರಸಾದ್, ಮುಖ್ಯಮಂತ್ರಿ ಪ್ರಧಾನ ಕಾರ್ಯದರ್ಶಿ ಮಂಜುನಾಥ ಪ್ರಸಾದ್ ಸಭೆಯಲ್ಲಿ ಪಾಲ್ಗೊಂಡಿದ್ದರು.

### ಯಾವುದೇ ನೇಮಕ ಪ್ರಕ್ರಿಯೆ ನಡೆದಿಲ್ಲ

**ಬೆಂಗಳೂರು:** ಕೆಎಸ್‌ಆರ್‌ಟಿಸಿ ಘಟಕದಲ್ಲಿ ಸಹಾಯಕ ಸಂಚಾರ ನಿರೀಕ್ಷಕ, ಸಂಚಾರ ನಿರೀಕ್ಷಕ ಮತ್ತು ಭದ್ರತಾ ಅಧಿಕಾರಿ ಹುದ್ದೆಗಳಿಗೆ ಯಾವುದೇ ರೀತಿಯ ನೇಮಕ ಪ್ರಕ್ರಿಯೆ ನಡೆದಿಲ್ಲ. ಆದರೆ ಕೆಲವರು ಕೆಲಸ ಕೊಡಿಸುವುದಾಗಿ ಹಲವು ಅಭ್ಯರ್ಥಿಗಳಿಂದ ನಿಗಮಕ್ಕೆ ಸಂಬಂಧಪಡದ ವ್ಯಕ್ತಿಗಳು ಹಣ ಪಡೆದಿರುವ ಬಗ್ಗೆ ನಿಗಮದ ಗಮನಕ್ಕೆ ಬಂದಿರುತ್ತದೆ. ನಿಗಮದಲ್ಲಿ ನಡೆಯುವಂತಹ ಎಲ್ಲಾ ನೇಮಕಗಳಿಗೆ ಸಂಬಂಧಿಸಿದಂತೆ ಜಾಹೀರಾತುಗಳನ್ನು ಪ್ರಮುಖ ದಿನಪತ್ರಿಕೆಗಳಲ್ಲಿ ಹಾಗೂ ನಿಗಮದ ಅಧಿಕೃತ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗುತ್ತದೆ. ಎಲ್ಲ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಸ್ವೀಕರಿಸಿ, ಸಂಸ್ಥೆಯಲ್ಲಿ ಚಾಲ್ತಿಯಲ್ಲಿರುವ ಪದವಿ ಮತ್ತು ನೇಮಕಾತಿ ನಿಯಮಾವಳಿಗಳನ್ವಯ ಪಾರದರ್ಶಕವಾಗಿ ಆಯ್ಕೆ ಮಾಡಲಾಗುತ್ತದೆ. ಇನ್ನು ಮುಂದೆ ನಿಗಮದಲ್ಲಿ ಯಾವುದೇ ಹುದ್ದೆಯನ್ನು ಕೊಡಿಸುವುದಾಗಿ ಆಮಿಷ ವೊಡ್ಡಿದಲ್ಲಿ ಕೂಡಲೇ ಕೇಂದ್ರ ಕಚೇರಿಗೆ ದೂರು ನೀಡುವಂತೆ ಮನವಿ ಮಾಡಲಾಗಿದೆ.

### 5 ಘಟಕದಲ್ಲಿ ವಿದ್ಯುತ್ ಉತ್ಪಾದನೆ ಸ್ಥಗಿತ

**ಬೆಂಗಳೂರು:** ಕಲ್ಲಿದ್ದಲಿನ ತೀವ್ರ ಕೊರತೆಯಿಂದಾಗಿ ಇಲ್ಲಿನ ಐದು ಶಾಖೋತ್ಪನ್ನ ಘಟಕಗಳಲ್ಲಿ ವಿದ್ಯುತ್ ಉತ್ಪಾದನೆ ಸ್ಥಗಿತಗೊಳಿಸಲಾಗಿದೆ. ಇದರಿಂದಾಗಿ ರಾಜ್ಯದಲ್ಲಿ ವಿದ್ಯುತ್ ಸಮಸ್ಯೆ ಎದುರಾಗುವ ಭೀತಿ ಆರಂಭವಾಗಿದೆ. ಶಕ್ತಿ ನಗರದ ಆರ್‌ಟಿಪಿಎಸ್ ಕೇಂದ್ರದಲ್ಲಿ ಕಲ್ಲಿದ್ದಲು ಸಮಸ್ಯೆ ತೀವ್ರವಾಗಿದೆ. ಹೀಗಾಗಿ ಮಂಗಳವಾರ ನಾಲ್ಕು ಘಟಕಗಳಲ್ಲಿ ವಿದ್ಯುತ್ ಉತ್ಪಾದನೆ ಸ್ಥಗಿತಗೊಳಿಸಿ ಬಾಕಿ ಉಳಿದ ನಾಲ್ಕು ಘಟಕಗಳಲ್ಲಿ ಮಾತ್ರ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿತ್ತು. ಈಗ ಕಲ್ಲಿದ್ದಲು ಕೊರತೆಯಿಂದಾಗಿ ಇನ್ನೂ ಒಂದು ಘಟಕದಲ್ಲಿ ವಿದ್ಯುತ್ ಉತ್ಪಾದನೆ ಸ್ಥಗಿತಗೊಳಿಸಲಾಗಿದೆ. ಆರ್‌ಟಿಪಿಎಸ್‌ನಲ್ಲಿ ಒಟ್ಟು ಎಂಟು ಘಟಕಗಳಿದ್ದು, 1760 ಮೆ.ವಾ. ಉತ್ಪಾದಿಸುವ ಸಾಮರ್ಥ್ಯ ಹೊಂದಿದೆ. ಈಗ ಎಂಟು ಘಟಕಗಳ ಪೈಕಿ 2,4,6 ಘಟಕಗಳಿಂದ 490 ಮೆ.ವಾ. ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ. ಇನ್ನುಳಿದ 1,3,5,7,8 ಘಟಕಗಳಲ್ಲಿ ವಿದ್ಯುತ್ ಉತ್ಪಾದನೆಯನ್ನು ಸ್ಥಗಿತಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ವಿದ್ಯುತ್ ಅಭಾವ ಎದುರಾಗುವ ಸಾಧ್ಯತೆಯಿದೆ ಎಂದು ತಿಳಿದುಬಂದಿದೆ.

### ಉಪಸಮರ: ಸಿಎಂ-ಕಟೀಲ್ ಸಭೆ

**ಬೆಂಗಳೂರು:** ಸಿಂದಗಿ ಮತ್ತು ಹಾನಗಲ್ ವಿಧಾನ ಸಭಾ ಉಪಚುನಾವಣೆಗಳು ಘೋಷಣೆಯಾಗಿವೆ. ನಾಮಪತ್ರ ಸಲ್ಲಿಕೆಯೂ ಮುಗಿದಿದೆ. ಚುನಾವಣಾ ಕಾರ್ಯತಂತ್ರ, ಮುಂದಿನ ಪ್ರವಾಸದ ಕುರಿತು ನಾನು ಮತ್ತು ಮುಖ್ಯಮಂತ್ರಿ ಚರ್ಚಿಸಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡೂ ಕ್ಷೇತ್ರಗಳಲ್ಲಿ ನಾವು ಗೆಲ್ಲಲಿದ್ದೇವೆ. ಅದಕ್ಕೆ ಪೂರಕವಾದ ಕಾರ್ಯಗಳನ್ನು ಮಾಡುತ್ತಿದ್ದೇವೆ ಎಂದರು. ಜಿಲ್ಲಾ ಪಂಚಾಯತ್ ಕ್ಷೇತ್ರಕ್ಕೆ ಸಚಿವರು, ಶಕ್ತಿ ಕೇಂದ್ರಕ್ಕೆ ಶಾಸಕರು ಮತ್ತು ಮತಗಟ್ಟೆಯಲ್ಲಿ ಪದಾಧಿಕಾರಿಗಳನ್ನು ಜೋಡಿಸಲಾಗಿದೆ ಎಂದರು. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬ ಪ್ರಮುಖ ಸಚಿವರು ಹಾಗೂ ಪಾರ್ಟಿಯಿಂದ ಒಬ್ಬ ಪ್ರಧಾನ ಕಾರ್ಯದರ್ಶಿಯನ್ನು ಜೋಡಿಸಲಾಗಿದೆ. ರಾಜ್ಯದ ಕೆಲವು ಪ್ರಮುಖರನ್ನು ಈಗ ಪ್ರವಾಸಕ್ಕೆ ಜೋಡಿಸಲಾಗಿದೆ ಎಂದರು. ಇದೇ 16ರ ಬಳಿಕ ಎಲ್ಲ ಸಚಿವರು 2 ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಚಾರ ಕಾರ್ಯ ಕೈಗೊಳ್ಳಲಿದ್ದಾರೆ. ಸಂಬಂಧಿತ ಸಂಸದರು ಮತ್ತು ಶಾಸಕರನ್ನೂ ಜೋಡಿಸಿದ್ದು, ಅವರೂ ಅಲ್ಲಿ ಇರುತ್ತಾರೆ. ಯಡಿಯೂರಪ್ಪ ಅವರೂ 2 ಕಡೆ ಪ್ರವಾಸ ಮಾಡಲಿದ್ದಾರೆ ಎಂದು ತಿಳಿಸಿದರು.

{ ಬಸವರಾಜ ಬೊಮ್ಮಾಯಿ } ಮುಖ್ಯಮಂತ್ರಿ

ನೈತಿಕ ಪೊಲೀಸ್ ಗಿರಿ ಅತ್ಯಂತ ಸೂಕ್ಷ್ಮದ ವಿಚಾರ, ಸಮಾಜದಲ್ಲಿ ಜವಾಬ್ದಾರಿ ಎಲ್ಲರಲ್ಲೂ ಬರಬೇಕು. ಸಮಾಜದಲ್ಲಿ ಕೆಲವೊಂದು ಭಾವನೆಗಳಿವೆ. ಆ ಭಾವನೆಗಳಿಗೆ ಧಕ್ಕೆಯಾಗದಂತೆ ನಡೆದುಕೊಳ್ಳಬೇಕಾಗುತ್ತದೆ. ಆ ಭಾವನೆಗಳಿಗೆ ಧಕ್ಕೆಯಾದಾಗ ಸಹಜವಾಗಿ ಕ್ರಿಯೆ-ಪ್ರಕ್ರಿಯೆಗಳು ಆಗುತ್ತವೆ. ಆದ್ದರಿಂದ ಸರಕಾರದ ಕರ್ತವ್ಯ ಕಾನೂನು ಸುವ್ಯವಸ್ಥೆಯನ್ನು ಕಾಪಾಡಿ, ಸಾಮರಸ್ಯ ಕಾಪಾಡಲು ಕ್ರಮ ಕೈಗೊಳ್ಳುವುದು.



ಸಿದ್ದು-ಬಿಎಸ್‌ವೈ ಭೇಟಿ ಎನ್ನುವ ಎಚ್‌ಡಿಕೆ ಮಾತಲ್ಲಿ ಹುರುಳಿಲ್ಲ | ಬಿಎಸ್‌ವೈರನ್ನು ಭೇಟಿಯಾಗಿರುವುದು ಸಾಬೀತಾದರೆ ರಾಜಕೀಯ ಸನ್ಯಾಸ

# ಮುಂದುವರಿದ ಮಾಜಿ ಸಿಎಂಗಳ ತಿಕ್ಕಾಟ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

'ಸಿದ್ದರಾಮಯ್ಯ ಜತೆ ಯಡಿಯೂರಪ್ಪ ಮುಂದಿನ ಚುನಾವಣೆಯಲ್ಲಿ ಕೈಜೋಡಿಸಲಿದ್ದಾರೆ' ಎನ್ನುವ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರ ಹೇಳಿಕೆ ಇದೀಗ ರಾಜ್ಯ ರಾಜಕೀಯದಲ್ಲಿ ಭಾರಿ ಸಂಚಲನಕ್ಕೆ ಕಾರಣವಾಗಿದ್ದು, ಈ ಆರೋಪವನ್ನು ಸಿದ್ದರಾಮಯ್ಯ ಹಾಗೂ ಯಡಿಯೂರಪ್ಪ ಇಬ್ಬರೂ ಸಾರಸಗಟಾಗಿ ತಳ್ಳಿಹಾಕಿದ್ದಾರೆ.

ಕುಮಾರಸ್ವಾಮಿ ಅವರ ಈ ಹೇಳಿಕೆಗೆ ಸಿದ್ದರಾಮಯ್ಯ ಅವರು ಸವಾಲು ಹಾಕಿದ್ದು, 'ಯಡಿಯೂರಪ್ಪ ಅವರನ್ನು ಭೇಟಿಯಾಗಿದ್ದ ಸಾಬೀತು ಮಾಡಿದರೆ ರಾಜಕೀಯ ಸನ್ಯಾಸ ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ.' ಇತ್ತ ಯಡಿಯೂರಪ್ಪ ಅವರು ಈ ಎಲ್ಲ ಹೇಳಿಕೆ ಆಧಾರರಹಿತ ಎಂದು ಟ್ವೀಟ್ ಮಾಡಿದ್ದಾರೆ.

ಕುಮಾರಸ್ವಾಮಿ ಅವರ ಹೇಳಿಕೆಗೆ ಕಲಬುರಗಿಯಲ್ಲಿ ಪ್ರತಿಕ್ರಿಯಿಸಿರುವ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ನಾನು ಭೇಟಿಯಾಗಿದ್ದನ್ನು ಎಚ್.ಡಿ.ಕುಮಾರಸ್ವಾಮಿ ಸಾಬೀತು ಮಾಡಿದರೆ ರಾಜಕೀಯ ಸನ್ಯಾಸ ಸ್ವೀಕರಿಸುತ್ತೇನೆ ಎಂದಿದ್ದಾರೆ. ಈ ಹಿಂದೆ ಯಡಿಯೂರಪ್ಪ ಅವರ 76ನೇ ಜನ್ಮದಿನದಂದು ಮಾತ್ರ ನಾನು ಖುದ್ದಾಗಿ ಭೇಟಿ ಮಾಡಿದ್ದೇನೆ. ನಂತರ ಸದನದಲ್ಲಿ ಮುಖಾಮುಖಿಯಾಗಿದ್ದೇವೆ. ಇದನ್ನು ಹೊರತು ಪಡಿಸಿ ವೈಯಕ್ತಿಕವಾಗಿ ನಾನು ಯಡಿಯೂರಪ್ಪನವರನ್ನು ಭೇಟಿ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ಯಡಿಯೂರಪ್ಪ ಆಪ್ತರ ಮೇಲೆ ಆದಾಯ ತೆರಿಗೆ ಇಲಾಖೆಯ ದಾಳಿಗೆ ನನ್ನ ಭೇಟಿ ಕಾರಣ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಸರಕಾರ ನಡೆಸುವವರು ಯಾರು? ಮೋದಿ, ಯಡಿಯೂರಪ್ಪ ಮತ್ತು ಐಟಿ ದಾಳಿಗೊಳಗಾದ ಆಪ್ತರು ನಮ್ಮ ಪಕ್ಷದವರಾ? ನಾನು ಪ್ರತಿಪಕ್ಷದಲ್ಲಿ ಇದ್ದಾಗ ಆಡಳಿತ ಪಕ್ಷದವರ ಮನೆ, ಕಚೇರಿಗೆ ಹೋಗಿಲ್ಲ. ಇಷ್ಟು ವರ್ಷಗಳ ನನ್ನ ರಾಜಕೀಯ ಜೀವನದಲ್ಲಿ ಯಾರ ಮನೆಗೂ ಹೋಗಿಲ್ಲ. ಕುಮಾರಸ್ವಾಮಿ ಹಾಗೆ ಭೇಟಿ ಮಾಡುವ ಗಿರಾಕಿ ಎಂದು ವ್ಯಂಗ್ಯವಾಡಿದರು.

**ಸಿದ್ದರಾಮಯ್ಯ ಅವರನ್ನು ಭೇಟಿಯಾಗಿಲ್ಲ:** ಕುಮಾರಸ್ವಾಮಿ ಅವರ ಹೇಳಿಕೆಗೆ ಮಾಜಿ ಸಿಎಂ ಯಡಿಯೂರಪ್ಪ ಅವರು ಟ್ವೀಟ್ ಮೂಲಕ ಪ್ರತಿಕ್ರಿಯಿಸಿದ್ದು, 27 ಫೆಬ್ರವರಿ 2020ರಂದು ನಡೆದ ನನ್ನ ಜನ್ಮದಿನದ ಕಾರ್ಯಕ್ರಮ ಹೊರತುಪಡಿಸಿ, ಸಿದ್ದರಾಮಯ್ಯ ಅವರನ್ನು ನಾನು ವೈಯಕ್ತಿಕವಾಗಿ ಭೇಟಿ ಮಾಡಿಲ್ಲ, ಹಾಗೆ ಭೇಟಿ ಮಾಡುವ ಅಗತ್ಯವೂ ನನಗಿಲ್ಲ. ರಾಜ್ಯದಲ್ಲಿ ಬಿಜೆಪಿಯನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ, ಪಕ್ಷದಲ್ಲಿ ನಾವು ಕಾರ್ಯನಿರ್ವಹಿಸುತ್ತಿದ್ದೇವೆ ಎಂದಿದ್ದಾರೆ.

ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವ ಗುರಿ ತಲುಪುವ ತನಕ ನಾನು ವಿಶ್ರಮಿಸುವುದಿಲ್ಲ. ನಂಬಿದ ಸಿದ್ಧಾಂತಗಳೊಂದಿಗೆ ನಾನೆಂದಿಗೂ ರಾಜಿಯಾಗಿಲ್ಲ, ಆಗುವುದೂ ಇಲ್ಲ. ಹಾಗೆಯೇ ಸಿದ್ದರಾಮಯ್ಯನವರು ಕೂಡ ಭೇಟಿಯಾಗಿಲ್ಲವೆಂದು ಸ್ಪಷ್ಟಪಡಿಸಿರುವುದರಿಂದ ಈ ಆರೋಪ ಸತ್ಯಕ್ಕೆ ದೂರವಾಗಿದ್ದು, ಅರ್ಥರಹಿತವಾಗಿದೆ' ಎಂದು ಸ್ಪಷ್ಟಪಡಿಸುತ್ತಿದ್ದೇನೆ ಎಂದಿದ್ದಾರೆ.

### ಕುಮಾರಸ್ವಾಮಿಗೆ ಎರಡು ನಾಲಿಗೆ: ಸಿದ್ದರಾಮಯ್ಯ

ಕುಮಾರಸ್ವಾಮಿ ಅವರಿಗೆ ಸತ್ಯ ಹೇಳುವುದು ಗೊತ್ತೇ ಇಲ್ಲ, ಬರಿ ಸುಳ್ಳು ಹೇಳುತ್ತಾರೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಮ್ಮಿಶ್ರ ಸರಕಾರ ಪತನವಾಗಲು ನಾನು ಕಾರಣ ಎಂದು ಕುಮಾರಸ್ವಾಮಿ ಆರೋಪಿಸಿದ್ದಾರೆ. ಅಂದು ವಿಧಾನಸಭೆಯಲ್ಲಿ ಅವಿಶ್ವಾಸ ಗೊತ್ತುವಳಿ ಸಂದರ್ಭ ಮಾಡಿದ ಭಾಷಣದಲ್ಲಿ ಸರಕಾರ ಪತನಕ್ಕೆ ಯಡಿಯೂರಪ್ಪನವರು ಕಾರಣ ಎಂದಿದ್ದರು. ಅವರಿಗೆ ಎರಡು ನಾಲಿಗೆ ಇದೆಯಾ? ಮೈಸೂರಿನ ಜನರನ್ನು ನನ್ನ ವಿರುದ್ಧ ಎತ್ತಿಕಟ್ಟಲು ಯತ್ನಿಸುತ್ತಿದ್ದಾರೆ ಎಂದು ಹೇಳಿದರು. ಕುಮಾರಸ್ವಾಮಿ ನನ್ನ ಜತೆ ಕಾಲು ಕೆರೆದು ಜಗಳಕ್ಕೆ ಬರುತ್ತಿದ್ದಾರೆ. ಶಾಸಕರು ಬಿಜೆಪಿ ಜತೆ ತೆರಳುವ ಸುಳಿವು ಸಿಕ್ಕಿದಾಗ ಅವರು ಅಮೆರಿಕದಲ್ಲಿದ್ದರು. ಬನ್ನಿ ಎಂದು ಕರೆದರೂ ಬರಲಿಲ್ಲ. ಈಗ ನನ್ನ ಮೇಲೆ ಆರೋಪ ಮಾಡುತ್ತಾರೆ. ಅವರ ಆರೋಪಗಳಿಗೆ ಉತ್ತರಿಸಿ ಸಾಕಾಗಿದೆ. ಇನ್ನು ಅವರ ಹೇಳಿಕೆಗಳಿಗೆ ಪ್ರತಿಕ್ರಿಯೆ ಕೊಡುವುದಿಲ್ಲ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.



ಪುಟಗೋಸಿ ಪ್ರತಿಪಕ್ಷದ ನಾಯಕನಾಗಲು ಸರಕಾರ ಕೆಡವಿದೆ ಎಂದು ಆರೋಪಿಸಿದ್ದಾರೆ. ಒಂದು ಸಂವಿಧಾನಾತ್ಮಕ ಹುದ್ದೆಯನ್ನು ಮುಖ್ಯಮಂತ್ರಿ ಆಗಿದ್ದವರು ಇಷ್ಟೊಂದು ಕೀಳಾಗಿ ನೋಡಿದರೆ ಹೇಗೆ? ಅವರ ತಂದೆ ಎಚ್.ಡಿ.ದೇವೇಗೌಡ ಅವರು ದೇವರಾಜ ಅರಸು ಅವರು ಮುಖ್ಯಮಂತ್ರಿಯಾಗಿದ್ದಾಗ ಪ್ರತಿಪಕ್ಷದ ನಾಯಕರಾಗಿದ್ದರು. ಹಾಗಿದ್ದರೆ ಅವರೂ ಪುಟಗೋಸಿನಾ?

\- ಸಿದ್ದರಾಮಯ್ಯ ಪ್ರತಿಪಕ್ಷ ನಾಯಕ



ದೇವೇಗೌಡರು, ಶಾಂತವೇರಿ ಗೋಪಾಲಗೌಡರಂತಹ ನಾಯಕರು ಪ್ರತಿಪಕ್ಷ ನಾಯಕರಾಗಿ ಆ ಹುದ್ದೆಗೆ ಘನತೆ ತಂದಿದ್ದರು. ಆದರೆ ಆ ಮಟ್ಟದ ಕೆಲಸ ಮಾಡಲು ಸಿದ್ದರಾಮಯ್ಯರಂಥ ವ್ಯಕ್ತಿಯಿಂದ ಸಾಧ್ಯವಿಲ್ಲ. ಇಂತಹವರಿಂದಲೇ ಆ ಹುದ್ದೆಯ ಘನತೆಗೆ ಕುಂದು ಉಂಟಾಗಿದೆ ಎಂದಷ್ಟೇ ಹೇಳಿದ್ದೇನೆ ಹೊರತು, ಸಂವಿಧಾನಿಕ ಹುದ್ದೆ ಬಗ್ಗೆ ಅಗೌರವವಾಗಿ ಮಾತನಾಡಿಲ್ಲ.

\- ಎಚ್.ಡಿ. ಕುಮಾರಸ್ವಾಮಿ ಮಾಜಿ ಮುಖ್ಯಮಂತ್ರಿ

### ಕೈ ವಿರುದ್ಧವೇ ಸಿದ್ದು ಸಂಚು; ಕುಮಾರಸ್ವಾಮಿ

ಸಿದ್ದರಾಮಯ್ಯ ವಿರುದ್ಧ ಮತ್ತೊಮ್ಮೆ ಕಿಡಿಕಾರಿರುವ ಕುಮಾರಸ್ವಾಮಿ ಅವರು, ಕಾಂಗ್ರೆಸ್ ಎಚ್ಚೆತ್ತುಕೊಳ್ಳದೇ ಹೋದರೆ ಸಿದ್ದರಾಮಯ್ಯ ಅವರೇ ಆ ಪಕ್ಷದ ಬುಡಕ್ಕೆ ಬೆಂಕಿ ಇಡುವುದು ಖಚಿತ ಎಂದಿದ್ದಾರೆ. ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಆಗಿದ್ದ ವೇಳೆ ಜೆಡಿಎಸ್‌ನಲ್ಲಿ ಇದ್ದುಕೊಂಡೇ, ಬಿಜೆಪಿ ಹಾಗೂ ಕಾಂಗ್ರೆಸ್ ನಲ್ಲಿನ ಮುಖಂಡರನ್ನು ಸೇರಿಸಿಕೊಂಡು 'ಅಹಿಂದ' ಹೆಸರಿನಲ್ಲಿ ಸಂಘಟನೆ ಮಾಡಿದ್ದರು. ಈ ಮೂಲಕ ಜೆಡಿಎಸ್ ಅನ್ನೇ ಮುಗಿಸಲು ಹೊರಟಿದ್ದರು. ಈಗ ಮತ್ತೆ ಅದೇ ಕೆಲಸ ಆರಂಭಿಸಿದ್ದಾರೆ ಎಂದು ಆರೋಪಿಸಿದರು. 'ಚರ್ಚೆಗೆ ಬನ್ನಿ' ಎಂಬ ಸಿದ್ದರಾಮಯ್ಯ ಅವರ ಸವಾಲನ್ನು ಸ್ವೀಕರಿಸಲು ಸಿದ್ಧನಿದ್ದೇನೆ. ನನ್ನ ತಂದೆ ನನಗೂ ರಾಜಕೀಯ ಕಲಿಸಿದ್ದಾರೆ. ಪಲಾಯನ ಮಾಡುವುದಿಲ್ಲ. ನೀವು ಈ ಚರ್ಚೆಗೆ ಮಂಗಳ ಹಾಡಿದರೆ ನಾನೂ ಸುಮ್ಮನಿರುತ್ತೇನೆ. ಇಲ್ಲವಾದರೆ ಮಾತನಾಡಲು ನನಗೂ ಬಹಳಷ್ಟು ವಿಷಯಗಳಿವೆ ಎಂದರು. ಮಂಡ್ಯದಲ್ಲಿ ಜೆಡಿಎಸ್ ಸಂಪೂರ್ಣ ವೀಕ್ ಆಗಿದೆ ಎನ್ನುತ್ತೀರಿ? ನಿಮಗೇಕೆ ನಮ್ಮ ಪಕ್ಷದ ಚಿಂತೆ? ಏಕೆ ಪದೇಪದೆ ನಮ್ಮನ್ನು ಕೆಣಕುತ್ತೀರಿ? ಮುಂದಿನ ಚುನಾವಣೆಯಲ್ಲಿ ಮಂಡ್ಯ ಜನತೆ ಯಾರ ಪರ ಎಂಬುದನ್ನು ತೋರಿಸಲಿದ್ದಾರೆ ಎಂದು ಹೇಳಿದರು. 2013ರಲ್ಲೇ ಇದು ನನ್ನ ಕೊನೆಯ ಚುನಾವಣೆ ಎಂದಿದ್ದೀರಿ. ಆದರೂ ಇನ್ನೂ ನಿಮ್ಮ ಮುಖ್ಯಮಂತ್ರಿ ಆಸೆ ಹೋಗಿಲ್ಲ ಎಂದು ಟೀಕಿಸಿದರು.

## ಭ್ರಷ್ಟ ಎನ್ನುವುದನ್ನು ಪಕ್ಷದವರೇ ಹೇಳಿದ್ದಾರೆ

**ಬೆಂಗಳೂರು:** ಕೊತ್ವಾಲ್ ರಾಮಚಂದ್ರನ ಶಿಷ್ಯನ ಬ್ರಹ್ಮಾಂಡ ಭ್ರಷ್ಟಾಚಾರವನ್ನು ಅವರದೇ ಪಕ್ಷದ ಮುಖಂಡರು ಕಾಂಗ್ರೆಸ್ ಕಚೇರಿಯಲ್ಲೇ ಬಹಿರಂಗಪಡಿಸಿದ್ದಾರೆ ಎಂದರೆ ಕೆಪಿಸಿಸಿಗೆ ಎಂಥ ದುರ್ಗತಿ ಬಂದಿರಬಹುದು ಎಂದು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ವ್ಯಂಗ್ಯವಾಡಿದ್ದಾರೆ.



ಈ ಕುರಿತು ಸರಣಿ ಟ್ವೀಟ್ ಮಾಡಿರುವ ಅವರು, ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಅವರು ನಡೆಸುತ್ತಿರುವ ಕಲೆಕ್ಷನ್ ಗುಟ್ಟನ್ನು ಕೊನೆಗೂ ಅವರದೇ ಪಕ್ಷದ ಮುಖಂಡರಾದ ವಿ.ಎಸ್.ಉಗ್ರಪ್ಪ ಮತ್ತು ಸಲೀಂ ಗುಸುಗುಸಿನಲ್ಲೇ ಜಗಜ್ಜಾಹಿರ ಮಾಡಿದ್ದಾರೆ. ಕಾಣದ ಕಲೆಕ್ಷನ್ ಇನ್ನು ಎಷ್ಟಿರಬಹುದೆಂದು ಪ್ರಶ್ನಿಸಿದ್ದಾರೆ.

ಸಿದ್ದರಾಮಯ್ಯನವರ ಶಿಷ್ಯ ಪಡೆ ನಿಮಗೆ ಖೆಡ್ಡಾ ತೋಡಲು ಪ್ರಾಯಶಃ ಸಜ್ಜಾಗಿರುವಂತೆ ಕಾಣುತ್ತಿದೆ. ಒಂದು ಕಡೆ ತಮ್ಮ ನಾಯಕನನ್ನು ಹೊಗಳಿ, ಇನ್ನೊಂದು ಕಡೆ ನಿಮ್ಮನ್ನು ಜನತೆ ಮುಂದೆ ಬೆತ್ತಲು ಮಾಡಲು ಹೊರಟಿದಂತಿದೆ. ಯಾವುದಕ್ಕೂ ಎಚ್ಚೆತ್ತುಕೊಳ್ಳುವುದು ಒಳಿತು ಎಂದು ವ್ಯಂಗ್ಯಭರಿತ ಸಲಹೆ ಕೊಟ್ಟಿದ್ದಾರೆ. ಐಟಿ-ಇಡಿ ದಾಳಿ ರಾಜಕೀಯ ಪ್ರೇರಿತ ಎಂದು ಬೊಬ್ಬೆ ಹೊಡೆಯುವ ನಾಯಕರೇ, ನಿಮ್ಮ ಅಧ್ಯಕ್ಷರ ಬ್ರಹ್ಮಾಂಡ ಭ್ರಷ್ಟಾಚಾರ ಬೆತ್ತಲಾಗಿಸಿದ್ದಾರೆ. ಭ್ರಷ್ಟ ಅಧ್ಯಕ್ಷನನ್ನು ಇಟ್ಟುಕೊಂಡು ಉಪಚುನಾವಣೆಯಲ್ಲಿ ಯಾವ ಮುಖವಿಟ್ಟುಕೊಂಡು ಮತ ಕೇಳುತ್ತೀರಿ ಎಂದು ವಾಗ್ದಾಳಿ ನಡೆಸಿದ್ದಾರೆ.

## ವನ್ಯಜೀವಿ ಛಾಯಾಗ್ರಹಣ, ಹತ್ತರ ಪೋರನ ಸಾಧನೆ

← ಮೊದಲಪುಟದಿಂದ

ಕಳೆದ ವರ್ಷದ ಸಿಟಿ ಸಿಗ್ನೇಚರ್ ಫೋಟೋಗ್ರಫಿಗೆ, ಹೈಲಿ ಕಮಾಂಡೆಡ್ ಪ್ರಶಸ್ತಿಯನ್ನು ಗೆದ್ದುಕೊಂಡಿದ್ದ. ಸಣ್ಣ ಸಣ್ಣ ಕೀಟಗಳ ವಿವಿಧ ಪ್ರಕ್ರಿಯೆಗಳನ್ನು ಹಿಡಿಯುವಲ್ಲಿ ಆಸಕ್ತಿ ಹೊಂದಿರುವ ವಿದ್ಯುನ್, ಮನೆಯಲ್ಲಿ ಇರುವ ಛಾಯಾಗ್ರಹಣ ಪರಿಸರವನ್ನು ಬಳಸಿಕೊಂಡು ಮಹಾಸಾಧನೆ ಕಡೆಗೆ ಮುಖ ಮಾಡಿದ್ದಾನೆ. ವಿದ್ಯುನ್ ಭವಿಷ್ಯದ ಉತ್ತಮ ವನ್ಯಜೀವಿ ಛಾಯಾಗ್ರಾಹಕರಾಗಿ ಗುರುತಿಸಿಕೊಳ್ಳುವ ಎಲ್ಲ ಲಕ್ಷಣಗಳನ್ನು ತೋರಿಸಿದ್ದಾನೆ.

**ಸ್ಪರ್ಧೆ ನಡೆಯುವುದು ಹೇಗೆ?:** ಲಂಡನ್ ನ್ಯಾಚುರಲ್ ಹಿಸ್ಟರಿ ಮ್ಯೂಸಿಯಂನಿಂದ ಪ್ರತಿ ವರ್ಷ ಈ ಸ್ಪರ್ಧೆ ನಡೆಯುತ್ತದೆ. ಎಂಟ್ರಿ ಒಪನ್ ಆದ ನಂತರ ಸುಮಾರು 50 ಸಾವಿರ ಚಿತ್ರಗಳು ಬರುತ್ತವೆ. ನಂತರ ಶಾರ್ಟ್ ಲಿಸ್ಟ್ ಮಾಡಿ, ಮುಂದಿನ ಹಂತದಲ್ಲಿ ಆಯ್ಕೆ ಮಾಡಲಾಗುತ್ತದೆ. ಮಕ್ಕಳು ಮತ್ತು ದೊಡ್ಡವರ ವಿಭಾಗದಲ್ಲಿ ಸ್ಪರ್ಧೆ ನಡೆಯುತ್ತದೆ. ಮಕ್ಕಳಿಗೆ ಮೂರು ವಿಭಾಗದಲ್ಲಿ ಆಯ್ಕೆ ನಡೆಯುತ್ತದೆ. ಹತ್ತು ವರ್ಷದೊಳಗಿನ, ಹದಿನಾಲ್ಕು ವರ್ಷದೊಳಗೆ ಮತ್ತು ಹದಿನೇಳು ವರ್ಷದೊಳಗಿನ ಒಬ್ಬರನ್ನು ಆಯ್ಕೆ ಮಾಡಲಾಗುತ್ತದೆ. ನಂತರ ಆ ಮೂವರಲ್ಲಿ ಆಯ್ಕೆಯಾದ ಫೋಟೋಗಳಲ್ಲಿ ಒಬ್ಬರನ್ನು ಗ್ರ್ಯಾಂಡ್ ಟೈಟಲ್‌ಗೆ ಆಯ್ಕೆ ಮಾಡಲಾಗುತ್ತದೆ. ವಿದ್ಯುನ್ ಈ ವಿಭಾಗದಲ್ಲಿ ಆಯ್ಕೆಯಾಗಿದ್ದಾನೆ.

**ಲಾಕ್‌ಡೌನ್‌ನಿಂದ ಉತ್ತಮ ಕಲಿಕೆ:** ಲಾಕ್‌ಡೌನ್‌ನಿಂದ ವಿದ್ಯುನ್‌ಗೆ ಫೋಟೋಗ್ರಾಫಿಯ ಸುಧಾರಣೆಗೆ ಅವಕಾಶ ಹೆಚ್ಚಿತು. ಶಾಲೆ ಅವಧಿ ಕಡಿಮೆ ಆಗಿದ್ದರಿಂದ ಮನೆಯಲ್ಲಿಯೇ ಉಳಿದ ವಿವಿಧ ವಸ್ತುಗಳು, ಸಣ್ಣಪುಟ್ಟ ಕೀಟಗಳ ಫೋಟೋ ತೆಗೆಯುವುದನ್ನು ರೂಢಿಸಿಕೊಂಡು ಹೆಚ್ಚಿನ ಕಲಿಕೆಗೆ ಅವಕಾಶವಾಯಿತು. ಈ ಸ್ಪರ್ಧೆ ಮತ್ತು ಬಹುಮಾನ ವಿತರಣೆ ಲಂಡನ್‌ನಲ್ಲಿ ನಡೆಯಬೇಕಿದ್ದು, ಕೋವಿಡ್ ಕಾರಣಕ್ಕೆ ಆನ್‌ಲೈನ್‌ನಲ್ಲೇ ನಡೆಯಿತು. ಮಂಗಳವಾರ ಸುಮಾರು 12.30 ರ ಭಾರತೀಯ ಕಾಲಮಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿದ್ಯುನ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾನೆ.

## ಜನಪ್ರತಿನಿಧಿಗಳ ಕರೆ ಸ್ವೀಕರಿಸದಿದ್ದರೆ ಕಠಿಣ ಕ್ರಮ

**ಬೆಂಗಳೂರು:** ತುರ್ತುಪರಿಸ್ಥಿತಿಯಲ್ಲಿ ಜನಪ್ರತಿನಿಧಿಗಳ ಕರೆಯನ್ನೇ ಅನೇಕ ಅಧಿಕಾರಿಗಳು ಸ್ವೀಕರಿಸುವುದಿಲ್ಲ ಎನ್ನುವ ಆರೋಪ ಹೆಚ್ಚಾಗುತ್ತಿರುವ ಬೆನ್ನಲ್ಲೇ, ರಾಜ್ಯ ಸರಕಾರ ನೂತನ ಸುತ್ತೋಲೆ ಹೊರಡಿಸಿದ್ದು, ಇನ್ನು ಮುಂದೆ ತುರ್ತು ಪರಿಸ್ಥಿತಿಯಲ್ಲಿ ಕರೆ ಸ್ವೀಕರಿಸದಿದ್ದರೆ ಕಠಿಣ ಕ್ರಮದ ಎಚ್ಚರಿಕೆ ರವಾನಿಸಿದೆ.

- **ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ಸುತ್ತೋಲೆ**
- **ಜನಪ್ರತಿನಿಧಿಗಳಿಗೆ ಅಗೌರವ ತೋರಿದರೆ ಸೂಕ್ತ ಕ್ರಮ**

ಹಲವು ವರ್ಷಗಳಿಂದ ಜನಪ್ರತಿನಿಧಿಗಳಿಗೆ ಅಧಿಕಾರಿಗಳು ಗೌರವ ನೀಡುವುದಿಲ್ಲ, ಕರೆ ಮಾಡಿದರೆ ಕರೆ ಸ್ವೀಕರಿಸುವುದಿಲ್ಲ ಎನ್ನುವ ಆರೋಪ ಕೇಳಿಬರುತ್ತಿತ್ತು. ಕೆಲವೊಮ್ಮೆ ಇದೇ ವಿಚಾರಕ್ಕೆ ಹಕ್ಕುಚ್ಯುತಿಯನ್ನು ಮಂಡಿಸಿದ ಉದಾಹರಣೆಗಳಿವೆ. ಅದರಲ್ಲಿಯೂ ಕಂದಾಯ ಇಲಾಖೆ ಅಧಿಕಾರಿಗಳು ಈ ರೀತಿ ನಡೆದುಕೊಳ್ಳುತ್ತಾರೆ ಎನ್ನುವ ಆರೋಪವನ್ನು ಮಾಡಿದ್ದಾರೆ.

ಆದ್ದರಿಂದ ಇದೀಗ ತುರ್ತು ಸಂದರ್ಭಗಳಲ್ಲಿ ಸಾಮಾನ್ಯ ಜನತೆ, ಜನಪ್ರತಿನಿಧಿಗಳು ದೂರವಾಣಿ ಕರೆ ಮಾಡಿದರೆ ಸ್ವೀಕರಿಸದೇ ಇರುವ ಕಂದಾಯ ಇಲಾಖೆ ನೌಕರರನ್ನು ಸರಕಾರ ತೀವ್ರ ತರಾಟೆಗೆ ತೆಗೆದುಕೊಂಡಿದೆ. ಈ ಕುರಿತಂತೆ ಸರಕಾರದ ಸೂಚನೆ ಅನುಸಾರ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ಸುತ್ತೋಲೆ ಹೊರಡಿಸಿದ್ದಾರೆ. ಕಂದಾಯ ಇಲಾಖೆಯು ರಾಜ್ಯದ ಹಾಗೂ ಸಮಾಜದ ಪ್ರಮುಖವಾದ ದೈನಂದಿನ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಿದೆ. ಜನಪ್ರತಿನಿಧಿಗಳ, ಸಾರ್ವಜನಿಕರ ಜತೆ ನಿಕಟ ಸಂಪರ್ಕ ಹಾಗೂ ಸಂಬಂಧ ಹೊಂದಿರುವ ಜನಸ್ನೇಹಿ ಇಲಾಖೆಯಾಗಿದೆ ಎಂದು ಇಲಾಖೆ ಮಹತ್ವ ತಿಳಿಸಿದ್ದಾರೆ.

ಕಂದಾಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಗ್ರಾಮ ಲೆಕ್ಕಿಗರಿಂದ ರಾಜಸ್ವ ನಿರೀಕ್ಷಕರು, ಉಪ ತಹಶೀಲ್ದಾರ್, ತಹಶೀಲ್ದಾರ್, ಉಪವಿಭಾಗಾಧಿಕಾರಿಗಳು, ಜಿಲ್ಲಾಧಿಕಾರಿಗಳು ನೇರವಾಗಿ ಜನರ ಹಾಗೂ ಜನಪ್ರತಿನಿಧಿಗಳ ಸಂಪರ್ಕದಲ್ಲಿರುತ್ತಾರೆ. ಮುಖ್ಯವಾಗಿ ಜನರ ಅಹವಾಲುಗಳನ್ನು ಇತ್ಯರ್ಥಪಡಿಸುವ ಪ್ರಥಮ ಹಂತದಲ್ಲಿನ ಪ್ರಮುಖ ಕಾರ್ಯ ತಹಶೀಲ್ದಾರ್‌ದಾಗಿರುತ್ತದೆ, ಈ ನಿಟ್ಟಿನಲ್ಲಿ ಸಾರ್ವಜನಿಕರ ಹಾಗೂ ಜನಪ್ರತಿನಿಧಿಗಳ ದೂರವಾಣಿ ಕರೆಗಳನ್ನು ತಹಶೀಲ್ದಾರರುಗಳು ಸ್ವೀಕರಿಸದಿರುವ ವಿಷಯ ಸರಕಾರದ ಗಮನಕ್ಕೆ ಬಂದಿರುತ್ತದೆ ಎಂದು ಕಟುವಾಗಿ ಹೇಳಲಾಗಿದೆ.

**ಸಾರ್ವಜನಿಕರ ಅಹವಾಲನ್ನು ಸ್ವೀಕರಿಸಿ:** ಇನ್ನು ಮುಂದೆ ಸಾರ್ವಜನಿಕರಿಂದ ಹಾಗೂ ಜನಪ್ರತಿನಿಧಿಗಳಿಂದ ಕರೆ ಬಂದಲ್ಲಿ ಅಧಿಕೃತವಾಗಿ ಕರೆಗಳನ್ನು ಸ್ವೀಕರಿಸಿ, ಸದರಿ ಅಹವಾಲು ಮನವಿಗಳಿಗೆ ಹೆಚ್ಚು ಗಮನ ನೀಡಬೇಕು. ಕಾನೂನಿನ ವ್ಯಾಪ್ತಿಯಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು. ಒಂದು ವೇಳೆ ಕರೆಗಳನ್ನು ಸಕಾಲದಲ್ಲಿ ಸ್ವೀಕರಿಸಲು ಸಾಧ್ಯವಾಗದೇ ಇದ್ದ ಪಕ್ಷದಲ್ಲಿ ಸಾರ್ವಜನಿಕರಿಗೆ ತಲುಪಿಸುವ ಸೇವೆಗಳಲ್ಲಿ ಏರುಪೇರು ಉಂಟಾಗುವ ಸಾಧ್ಯತೆಗಳಿರುತ್ತದೆ ಎಂದು ಹೇಳಲಾಗಿದೆ.

ತಪ್ಪಿದ ಕರೆಗಳಿಗೆ ಮರು ಕರೆ ಮಾಡಿ ಸಾರ್ವಜನಿಕರಿಂದ ಹಾಗೂ ಜನಪ್ರತಿನಿಧಿಗಳಿಂದ ಸ್ವೀಕೃತವಾಗುವ ಕರೆಯ ಕೋರಿಕೆ, ಮನವಿಗಳನ್ನು ಕಂದಾಯ ಇಲಾಖೆ ಜಿಲ್ಲಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರು, ಉಪ ತಹಶೀಲ್ದಾರರು, ರಾಜಸ ನಿರೀಕ್ಷಕರು ಮತ್ತು ಗ್ರಾಮಲೆಕ್ಕಿಗರು ಸ್ವೀಕರಿಸಲೇಬೇಕು ಎಂದು ಖಡಕ್ ಸೂಚನೆ ನೀಡಲಾಗಿದೆ.

ಮನವಿ, ದೂರುಗಳ ಬಗ್ಗೆ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು. ಜನಪ್ರತಿನಿಧಿಗಳಿಗೆ ಅಗೌರವ ತೋರಿರುವುದು ಕಂಡುಬಂದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು. ಈ ಬಗ್ಗೆ ಹಕ್ಕುಚ್ಯುತಿ ಉಂಟಾಗುವ ಸಾಧ್ಯತೆ ಇರುವುದರಿಂದ ಇದಕ್ಕೆ ಅವಕಾಶ ನೀಡದಂತೆ ಸಾರ್ವಜನಿಕರಿಂದ ಹಾಗೂ ಜನಪ್ರತಿನಿಧಿಗಳಿಂದ ಬರುವ ಕರೆಗಳನ್ನು ಅಧಿಕೃತವಾಗಿ ಸ್ವೀಕರಿಸಿ ಅಪೇಕ್ಷಿತ ಮಾಹಿತಿಯನ್ನು ನೀಡಬೇಕೆಂದು ಸೂಚನೆ ನೀಡಲಾಗಿದೆ.

### ಹಕ್ಕುಚ್ಯುತಿಯ ಎಚ್ಚರಿಕೆ

ಶಾಸಕಾಂಗದ ಪ್ರತಿನಿಧಿಗಳು ಕರೆ ಮಾಡಿದಾಗ ಅಥವಾ ಏನಾದರೂ ಕೇಳಿದಾಗ ಅದಕ್ಕೆ ಪ್ರತಿಕ್ರಿಯಿಸುವುದು ಅಧಿಕಾರಿಗಳ ಕರ್ತವ್ಯ. ಆದರೆ ಕೆಲಸದ ಹೆಸರಲ್ಲಿ ಕರೆ ಸ್ವೀಕರಿಸದೇ ಓಡಾಡಿದರೆ, ಶಿಷ್ಟಾಚಾರದ ಉಲ್ಲಂಘನೆಯಾಗುತ್ತದೆ. ಆದ್ದರಿಂದ ಇದೇ ವಿಷಯವಾಗಿ ಹಕ್ಕುಚ್ಯುತಿ ಕಾಯಿದೆಗೂ ಅನ್ವಯವಾಗುತ್ತದೆ. ಆದ್ದರಿಂದ ಈ ಬಗ್ಗೆ ಎಚ್ಚರಿಕೆಯಿಂದ ಇರುವಂತೆ ಅಧಿಕಾರಿಗಳಿಗೆ ತುಷಾರ್ ಗಿರಿನಾಥ್ ಎಚ್ಚರಿಸಿದ್ದಾರೆ.

### ಅಧಿಕಾರಿಗಳ ವಿರೋಧ

ಕಂದಾಯ ಇಲಾಖೆ ಹೊರಡಿಸಿರುವ ಈ ಆದೇಶಕ್ಕೆ ಕೆಲ ಅಧಿಕಾರಿಗಳು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಬಹುಪಾಲು ಸಮಯದಲ್ಲಿ ಅನೇಕ ಜನಪ್ರತಿನಿಧಿಗಳು ಸಾರ್ವಜನಿಕ ಅಥವಾ ತುರ್ತು ಕೆಲಸಕ್ಕಿಂತ, ತಮ್ಮೊಂದಿಗೆ ಇರುವವರ ಕೆಲಸ ಮಾಡಿಕೊಡುವಂತೆ ಒತ್ತಡ ಹೇರಲು ಕರೆ ಮಾಡುತ್ತಾರೆ. ಆ ಸಮಯದಲ್ಲಿ ಕರೆ ಸ್ವೀಕರಿಸಿದಿದ್ದರೂ, ಅದನ್ನು ಈ ಕಾನೂನಿನ ಕೆಳಗೆ ತರುವುದರಿಂದ ಸಮಸ್ಯೆಯಾಗುತ್ತದೆ. ಈ ಬಗ್ಗೆ ಸರಕಾರ ಎಚ್ಚರವಹಿಸಬೇಕು ಎಂದಿದ್ದಾರೆ.

## ಅಂತಾರಾಜ್ಯ ಗಡಿ ನಿರ್ಬಂಧ ಸಡಿಲಿಕೆ ಸಂಬಂಧ ಚರ್ಚೆ

**ಬೆಂಗಳೂರು:** ರಾಜ್ಯದಲ್ಲಿ ಹಾಗೂ ದೇಶದಲ್ಲಿ ಕರೋನಾ ಸೋಂಕು ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿರುವ ಬೆನ್ನಲ್ಲೇ, ಅಂತಾರಾಜ್ಯ ಗಡಿಗಳಲ್ಲಿ ಇರುವ ನಿರ್ಬಂಧವನ್ನು ಸಡಿಲಿಸುವ ಸಂಬಂಧ ದಸರಾ ಬಳಿಕ ಚರ್ಚಿಸಲಾಗುವುದು ಎಂದು ಸಿಎಂ ಬಸವರಾಜ ಬೊಮ್ಮಾಯಿ ಸ್ಪಷ್ಟಪಡಿಸಿದ್ದಾರೆ.



- **ದಸರಾ ಬಳಿಕ ತಜ್ಞರೊಂದಿಗೆ ಚರ್ಚಿಸಿ ತೀರ್ಮಾನ**
- **ಶಾಲಾರಂಭದ ಬಗ್ಗೆಯೂ ಚರ್ಚೆ ಎಂದ ಸಿಎಂ**

ಮಂಗಳೂರಿಗೆ ತೆರಳುವ ಮೊದಲು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಸರಾ ಮುಗಿದ ಬಳಿಕ ರಾಜ್ಯದ ಗಡಿಭಾಗಗಳಲ್ಲಿ ಕೋವಿಡ್ ನಿರ್ಬಂಧ ಸಡಿಲಿಕೆ ಹಾಗೂ ಪ್ರಾಥಮಿಕ ಶಾಲಾ ಆರಂಭದ ಬಗ್ಗೆ ಕೋವಿಡ್ ತಜ್ಞರ ಸಮಿತಿ ಜತೆ ಚರ್ಚಿಸಿ ಮುಂದಿನ ಕ್ರಮಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಕರ್ನಾಟಕಕ್ಕೆ ಹೊಂದಿಕೊಂಡಿರುವ ಕೇರಳ ಮತ್ತು ಮಹಾರಾಷ್ಟ್ರದಲ್ಲಿ ಇರುವ ಕೋವಿಡ್ ಪರಿಸ್ಥಿತಿ ಬಗ್ಗೆ ತಜ್ಞರು ಮೌಲ್ಯಮಾಪನ ಮಾಡುತ್ತಿದ್ದಾರೆ. ದಸರಾ ಹಬ್ಬದ ಬಳಿಕ ಕೋವಿಡ್ ತಜ್ಞರ ಸಭೆ ಕರೆಯಲಾಗುವುದು. ಗಡಿ ಜಿಲ್ಲೆಗಳಲ್ಲಿ ಈಗಿರುವ ನಿರ್ಬಂಧಗಳನ್ನು ಸಡಿಲ ಮಾಡುವ ಕುರಿತು ಚರ್ಚೆ ನಡೆಸಿ ತೀರ್ಮಾನ ತೆಗೆದುಕೊಳ್ಳಲಾಗುವುದು. ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸುವ ಸಂಬಂಧವೂ ತಜ್ಞರ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗುವುದು. ಇನ್ನು 2 ವರ್ಷದಿಂದ 12 ವರ್ಷಗಳ ವಯೋಮಾನದವರಿಗೆ ಕೋವಿಡ್ ಲಸಿಕೆ ಹಾಕುವ ಕುರಿತು ಪ್ರಯೋಗ ಕೊನೆ ಹಂತದಲ್ಲಿದೆ. ಅದಕ್ಕೆ ಎಲ್ಲಾ ರೀತಿಯ ಒಪ್ಪಿಗೆ ದೊರೆತ ತಕ್ಷಣ ಲಸಿಕೆ ಹಾಕಲಾಗುವುದು ಎಂದು ತಿಳಿಸಿದರು.

# ವೃದ್ಧಾಶ್ರಮಗಳು ಮಾನವೀಯತೆಗಿಂತ, ವ್ಯಾಪಾರದ ನೆಲೆಯಾಗಿವೆ

ಇಳಿ ವಯಸ್ಸಿನಲ್ಲಿ ಅಧ್ಯಾತ್ಮ ಕಡೆ ಚಿಂತನೆ ಮಾಡಬೇಕು | ನಮ್ಮ ಚಿಂತನೆಗಳು ಧನಾತ್ಮಕವಾಗಿರಲಿ: ಲತಿಕಾ ಭಟ್

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಆಧುನಿಕ ಸಮಾಜದಲ್ಲಿ ವೃದ್ಧಾಶ್ರಮಗಳು ಹೆಚ್ಚಾಗುತ್ತಿರುವುದು ವಿಪರ್ಯಾಸ. ಕಾರಣಾಂತರಗಳಿಂದ ಮಕ್ಕಳಿಂದ ದೂರವಾದ ತಂದೆ-ತಾಯಿಯರನ್ನು ನೋಡಿಕೊಳ್ಳುವ ಹೊಸ ವೃದ್ಧಾಶ್ರಮಗಳು ಪ್ರತಿ ಊರಿನಲ್ಲಿ ಎಂಬಂತೆ ಹುಟ್ಟಿಕೊಳ್ಳುತ್ತಿವೆ. ಮಾನವೀಯ ನೆಲೆಯಲ್ಲಿ ಹುಟ್ಟಿಕೊಳ್ಳುವ ವೃದ್ಧಾಶ್ರಮಗಳು ಅತ್ಯಂತ ವಿರಳ. ಹೆಚ್ಚಿನ ವೃದ್ಧಾಶ್ರಮಗಳು ವ್ಯಾಪಾರಿ ನೆಲೆಯಲ್ಲಿಯೇ ವ್ಯವಹಾರ ನಡೆಸುವಂತಹವು ಎಂದು ಸಾಮಾಜಿಕ ಕಾರ್ಯಕರ್ತೆ ಲತಿಕಾ ಭಟ್ ತಿಳಿಸಿದರು.

ವಿಶ್ವವಾಣಿ





ಸಂವಾದ-112

ವಿಶ್ವವಾಣಿ ಕ್ಲಬ್‌ಹೌಸ್‌ನಲ್ಲಿ ವಿಶೇಷ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ದಿನದಿಂದ ದಿನಕ್ಕೆ ಮನುಷ್ಯನು ಸಂಕುಚಿತನಾಗುತ್ತಾನೆ. ಕೂಡು ಕುಟುಂಬದಿಂದ ಹೊರಬಂದು ಕೇವಲ ತಾನು, ತನ್ನ ಹೆಂಡತಿ ಎಂಬ ತನ್ನದೇ ಆದ ಗೂಡನ್ನು ಕಟ್ಟಲು ಬಯಸುತ್ತಾನೆ. ಕೂಡು ಕುಟುಂಬ ಛಿದ್ರವಾಗುತ್ತಿದೆ. ಕುಟುಂಬದ ರೋಗಿ, ಅಶಕ್ತ, ಅಸಹಾಯಕ, ಅಂಗವಿಕಲ ವೃದ್ಧರ ಜವಾಬ್ದಾರಿಯನ್ನು ಹೊರಲು ಯಾರೂ ತಯಾರಿಲ್ಲ. ಇದರ ಪರಿಣಾಮವಾಗಿಯೇ ವೃದ್ಧಾಶ್ರಮಗಳು ಅನಿವಾರ್ಯವಾಗಿ ತಲೆ ಎತ್ತುತ್ತಿವೆ.

ವೃದ್ಧರಾಗಲು ಯಾರೂ ಬಯಸಲ್ಲ. ಚಿರ ಯುವಕ ಯುವತಿಯರಾಗಲು ಇಷ್ಟ ಪಡುತ್ತಾರೆ. ವೃದ್ಧಾಪ್ಯ ನಮ್ಮೆಲ್ಲರ ಜೀವನದ ಕೊನೆಯ ಘಟ್ಟ. ಜೀವನದಲ್ಲಿ ಎಲ್ಲವೂ ಸರಿಯಾಗಿದ್ದರೆ ಪರವಾಗಿಲ್ಲ. ಕೆಲವೊಮ್ಮೆ ಹಣ ಇಲ್ಲದಿದ್ದರೂ ಆರೋಗ್ಯ ಸರಿ ಇದ್ದರೆ ಜೀವನ ನಡೆದು ಹೋಗುತ್ತದೆ. ಆರೋಗ್ಯ ಕೆಟ್ಟರೆ ನೋಡಿಕೊಳ್ಳುವವರೂ ಇಲ್ಲದಿದ್ದಾಗ, ಹಣ ಇಲ್ಲದಿದ್ದಾಗ ಅವರ ಜೀವನ ನರಕ. ಇಂತಹವರಿಗೆ ವೃದ್ಧಾಶ್ರಮ ಅವಶ್ಯಕ. ಕೆಲವರು ಎಲ್ಲವೂ ಸರಿಯಾಗಿದ್ದರೂ ವೃದ್ಧಾಶ್ರಮಕ್ಕೆ ಬರುತ್ತಾರೆ ಎಂದು ಹೇಳಿದರು.

**ವೃದ್ಧಾಶ್ರಮ ದೇಶದ ಸಂಸ್ಕೃತಿಗೆ ವಿರುದ್ಧ:** ಹಿರಿಯರನ್ನು ಗೌರವದಿಂದ ನೋಡಿಕೊಳ್ಳಬೇಕು. ತಂದೆ- ತಾಯಿ ವಯಸ್ಸಾದಾಗ ಮಕ್ಕಳ ತರಹ ಆಗುತ್ತಾರೆ. ಹಿಂದಿನ ಕಾಲದಲ್ಲಿ ಒಟ್ಟು ಕುಟುಂಬದಲ್ಲಿ ಪೋಷಕರನ್ನು ನೋಡಿಕೊಳ್ಳುತ್ತಿದ್ದರು. ಕುಟುಂಬಗಳು ವಿಭಜನೆ ಆದಾಗ, ಆಸ್ತಿ ಪಾಲಾದಾಗ ಮನಸ್ಸುಗಳು ಪಾಲಾಗುತ್ತವೆ. ಇದರಿಂದ ತೊಂದರೆ ವೃದ್ಧರಿಗೆ ಆಗುತ್ತಿದೆ. ಇಳಿ ವಯಸ್ಸಿನಲ್ಲಿ ಮಕ್ಕಳು ದೂರವಿದ್ದು, ಶಕ್ತಿ ಇಲ್ಲದಿದ್ದಾಗ ಕಂಗಾಲಾಗುತ್ತಾರೆ. ಇದರಿಂದ ವೃದ್ಧಾಶ್ರಮ ಅವಶ್ಯಕ. ಮುಳುಗುವ ಸೂರ್ಯನಂತೆ ವೃದ್ಧರು. ನಾನು ವೃದ್ಧಾಶ್ರಮ ಸ್ಥಾಪಿಸಿದ್ದು ಅನಿರೀಕ್ಷಿತ ಎಂದು ವಿವರಿಸಿದರು.

ನಮ್ಮ ವೃದ್ಧಾಶ್ರಮದಲ್ಲಿ ವೃದ್ಧರು ಕೊಡುವ ಪ್ರೀತಿ ನನಗೆ ತೃಪ್ತಿ ಕೊಡುತ್ತದೆ. ವೃದ್ಧರಿಗಿರುವ ಚಟ ಬಿಡಿಸಲು ಅನೇಕ ಪ್ರಯೋಗಗಳನ್ನು ಮಾಡಲಾಗುತ್ತದೆ. ಹಾಗೆಯೇ ಅವರಿಗೆ ಅನುಕೂಲವಾದ ಆಹಾರ ನೀಡಲಾಗುತ್ತದೆ. ಪ್ರತಿ ಜನ್ಮವೂ ಯಾವುದೋ ಉದ್ದೇಶಕ್ಕಾಗಿ ಬಂದು ತನ್ನ ಕಾರ್ಯ ಮುಗಿಸಿ ಹೋಗುತ್ತದೆ. ನನಗೆ ದೇವರು ವಹಿಸಿದ ಕೆಲಸ ವೃದ್ಧಾಶ್ರಮ. ಇಂತಹ ಕಾಯಕ ನನಗೆ ಸಂತೋಷ, ಪರಮ ನೆಮ್ಮದಿ ನೀಡುತ್ತಿದೆ. ಈ ಸೇವೆಗೆ ಅವಕಾಶ ನೀಡಿದ ವೃದ್ಧರಿಗೆ ಪ್ರಶಂಸೆ ಸಮರ್ಪಿಸುತ್ತೇನೆ ಎಂದರು.

ಇಂದಿನ ಕಾಲಘಟ್ಟದಲ್ಲಿ ವೃದ್ಧಾಶ್ರಮಗಳು ಬೇಕು. ಜಗಳ ಮಾಡಿ ವೃದ್ಧಾಶ್ರಮಕ್ಕೆ ಬರುವ, ತಂದೆ- ತಾಯಿ ಕಿರಿ ಕಿರಿ ಮಾಡಿದರು ಎಂದು ಮಕ್ಕಳು ವೃದ್ಧಾಶ್ರಮಕ್ಕೆ ಸೇರಿಸುತ್ತಾರೆ. ಅಸಹಾಯಕ ವೃದ್ಧರಿಗೆ ಆಶ್ರಯಬೇಕು. ಅವರಲ್ಲಿ ಶಕ್ತಿ, ಆರೋಗ್ಯ ಇರಲ್ಲ. ಅವಶ್ಯಕತೆ ಇದ್ದವರು ಮಾತ್ರ ವೃದ್ಧಾಶ್ರಮಕ್ಕೆ ಬರಬೇಕು. ವೃದ್ಧಾಶ್ರಮಕ್ಕೆ ಕಳುಹಿಸುವ ಬದಲು ವೃದ್ಧಾಶ್ರಮಗಳಿಗೆ ಕೊಡುವ ದುಡ್ಡು ಒಬ್ಬರನ್ನು ನೋಡಿಕೊಳ್ಳಲು ನೇಮಿಸಿ, ಅವರಿಗೆ ಸಂಬಳ ಕೊಡಿ ಉಪಕಾರ ಆಗುತ್ತದೆ. ಮನೆಯೊಳಗೆ ಕಷ್ಟ ಆದರೆ ಚಿಕ್ಕದೊಂದು ಮನೆ ಮಾಡಿಸಿಕೊಡಿ ವೃದ್ಧರಿಗೆ ಎಂಬ ಸಲಹೆ ನೀಡಿದರು.

### ವೃದ್ಧಾಶ್ರಮಗಳಿಗೆ ವೃದ್ಧರು ಬರದಂತಿರಲು ಏನು ಮಾಡಬೇಕು?

- ನಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು.
- ಆಹಾರ-ವಿಹಾರ ಸಮತೋಲನದಲ್ಲಿಟ್ಟುಕೊಳ್ಳಿ.
- ಚಿಂತೆ ಮಾಡುವುದನ್ನು ಬಿಡಬೇಕು.
- ಒಳ್ಳೆಯ ಹವ್ಯಾಸ ಬೆಳೆಸಿಕೊಳ್ಳಿ. ಗೊಣಗಾಟ ಬೇಡ.
- ಮಕ್ಕಳು ಗೌರವ ಕೊಟ್ಟರೆ ಉಳಿಸಿಕೊಳ್ಳಲು ಪ್ರಯತ್ನಿಸಿ.

### ಸುಯೋಗಾಶ್ರಯದ ಸೇವಾಕಾರ್ಯ

ಮಾನವೀಯ ಸಂಬಂಧಗಳು ನೆಲೆ ಕಳೆದುಕೊಂಡಿವೆ ಎಂಬುದನ್ನು ಊರೂರಲ್ಲೂ ತಲೆ ಎತ್ತಿರುವ ವೃದ್ಧಾಶ್ರಮಗಳು ಸಾಬೀತು ಪಡಿಸುತ್ತವೆ. ಆದರೆ ಅದೇ ಮಾನವೀಯ ಮೌಲ್ಯ ಅಲ್ಲಲ್ಲಿ ಇನ್ನೂ ಉಸಿರಾಡುತ್ತಿದೆ ಎಂಬುದನ್ನು ಸ್ವಾರ್ಥವನ್ನೆಲ್ಲ ಮರೆತು ವೃದ್ಧಾಶ್ರಮ ಕಟ್ಟಿ, ಸಂಬಂಧವೇ ಇಲ್ಲದ ವ್ಯಕ್ತಿಗಳನ್ನೂ ಪ್ರೀತಿಯಿಂದ ಸಲಹುತ್ತಿರುವ ಹಲವರು ತೋರಿಸಿಕೊಟ್ಟಿದ್ದಾರೆ. ಅಂಥವರಲ್ಲಿ ಉತ್ತರ ಕನ್ನಡ ಶಿರಸಿಯ ಲತಿಕಾ ಭಟ್ ಸಹ ಒಬ್ಬರು. ಬಡ ಮಕ್ಕಳಿಗೆ ಉಚಿತ ಟ್ಯೂಶನ್, ಉದ್ಯೋಗ ಜೊತೆಗೆ ಮದುವೆ ಮಾಡಿಸುವ ಕೆಲಸದಿಂದ ಆರಂಭವಾದ ಇವರ ಸೇವಾ ಕಾರ್ಯ ಇದೀಗ ಸುಯೋಗಾಶ್ರಯ ಎಂಬ ವೃದ್ಧಾಶ್ರಮ ನಿರ್ಮಾಣದವರೆಗೆ ವ್ಯಾಪಿಸಿದೆ.



ಬೇಕಾದಷ್ಟು ಸಂಪನ್ಮೂಲ ಇದ್ದರೂ ತಂದೆ-ತಾಯಿಯರನ್ನು ನೋಡಿಕೊಳ್ಳಲು ಆಗದ ಪರಿಸ್ಥಿತಿ ಬಂದಾಗ ವೃದ್ಧಾಶ್ರಕ್ಕೆ ಕಳುಹಿಸುವ ಸನ್ನಿವೇಶಗಳು ಕಾಣಬಹುದಾಗಿದೆ. ವೃದ್ಧಾಶ್ರಮಗಳು ಜಾಸ್ತಿ ಆದರೂ ಯಾವ ದಿಕ್ಕಿಗೆ ಸಾಗುತ್ತಿದೆ ಎಂಬುದನ್ನು ನಾವು ತಿಳಿಯಲೇಬೇಕು. ಲತಿಕಾ ಭಟ್ ಅವರು ಸುಯೋಗ ಪ್ರತಿಷ್ಠಾನ ಕಟ್ಟಿ ಬಡವರಿಗೆ, ನಿರ್ಗತಿಕರಿಗೆ ಶಿಕ್ಷಣ, ಉದ್ಯೋಗ ನೀಡುತ್ತಿದ್ದಾರೆ. ಶಿರಸಿ ಸಮೀಪ ಸ್ವತಃ ವೃದ್ಧಾಶ್ರಮ ಕಟ್ಟಿ 170 ಕ್ಕೂ ಹೆಚ್ಚು ನಿರ್ಗತಿಕರಿಗೆ ಆಶ್ರಮ ನೀಡುತ್ತಿದ್ದಾರೆ.

\-ವಿಶ್ವೇಶ್ವರ ಭಟ್
ವಿಶ್ವವಾಣಿ ಪ್ರಧಾನ ಸಂಪಾದಕರು



ವಯಸ್ಸು ದೇಹಕ್ಕೆ ಆಗಬೇಕು, ಮನಸ್ಸಿಗಲ್ಲ. ವೃದ್ಧಾಶ್ರಮಗಳು ಒಂದು ರೀತಿ ನರಕ. ಇಲ್ಲಿ ಬದುಕಲು ಕಷ್ಟ. ವೃದ್ಧರು ಮನೆಯಲ್ಲಿ ಹೊಂದಾಣಿಕೆಯಿಂದ ಇರಬೇಕು. ಮಕ್ಕಳೊಂದಿಗೆ ವೃದ್ಧರು ಸಹಬಾಳ್ವೆ, ಪ್ರೀತಿಯಿಂದ ಇರಬೇಕು.

\- ಲತಿಕಾ ಭಟ್